RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-I | ಬೆಂಗಳೂರು, ಶುಕ್ರವಾರ, ಡಿಸೆಂಬರ್ ೯, ೨೦೧೬ (ಮಾರ್ಗಶಿರ ೧೮, ಶಕ ವರ್ಷ ೧೯೩೮) | ನಂ. ೧೩೪೬ |
|---|---|---|
| Part-I | Bengaluru, Friday, December 9, 2016 (Margashira 18, Shaka Varsha 1938) | No. 1346 |


**ಕರ್ನಾಟಕ ಸರ್ಕಾರದ ನಡವಳಿಗಳು**

**ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವಾಲಯ**

**ವಿಷಯ:** ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳಿಗೆ ಕಡ್ಡಾಯಗೊಳಿಸಿರುವ ಪ್ರಕಾರ್ಯಗಳನ್ನು ನಿರ್ವಹಿಸುವ ಬಗ್ಗೆ.

**ಪ್ರಸ್ತಾವನೆ:**

ಕರ್ನಾಟಕದಲ್ಲಿ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಜನಸ್ನೇಹಿಯನ್ನಾಗಿಸಲು ಹಾಗೂ ಜನರು ಆಡಳಿತ ಮತ್ತು ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮಾಡಲು ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣಗಳನ್ನು ಅಧ್ಯಯನ ಮಾಡಿ ಸೂಕ್ತ ತಿದ್ದುಪಡಿಯನ್ನು ಶಿಫಾರಸ್ಸುಮಾಡಲು ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ಮಾನ್ಯ ಶ್ರೀ ಕೆ.ಆರ್.ರಮೇಶ್‌ಕುಮಾರ್, ಮಾಜಿ ವಿಧಾನ ಸಭಾ ಅಧ್ಯಕ್ಷರು ಹಾಗೂ ಹಾಲಿ ಸಚಿವರ ಅಧ್ಯಕ್ಷತೆಯಲ್ಲಿ ರಚಿಸಲಾಗಿತ್ತು. ಸಮಿತಿಯು ನೀಡಿದ ಶಿಫಾರಸ್ಸಿನನ್ವಯ ಪ್ರಮುಖ 88 ಪ್ರಕರಣಗಳಿಗೆ ತಿದ್ದುಪಡಿ ತರಲಾಗಿದೆ.

ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳು ಅಧಿನಿಯಮದ ಅನುಸೂಚಿ I, II ಮತ್ತು III (ಪ್ರಕರಣ 312) ರಲ್ಲಿರುವ ಕಾರ್ಯಚಟುವಟಿಕೆಗಳನ್ನು ನಿರ್ದಿಷ್ಟಪಡಿಸಲಾಗಿದೆ. ಈ ಪ್ರಕಾರ್ಯಗಳ ಜೊತೆಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ ಪ್ರಕರಣ 58-1ಎ, 58(2), 145(2), 145(3), ಮತ್ತು 184(4) ರಲ್ಲಿ ಕಡ್ಡಾಯಗೊಳಿಸಿರುವ ಪ್ರಕಾರ್ಯಗಳನ್ನು ಸಹ ಮೂರು ಹಂತದ ಪಂಚಾಯತ್ ಸಂಸ್ಥೆಗಳು ನಿರ್ವಹಿಸಬೇಕಾಗಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1138 ಗ್ರಾಪಂಅ 2016, ದಿನಾಂಕ 09.12.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳು ಪ್ರಕರಣ 58-1ಎ, 58(2), 145(2), 145(3) ಮತ್ತು 184(4) ರಲ್ಲಿ ಕಡ್ಡಾಯಗೊಳಿಸಲಾಗಿರುವ ಕೆಳಗಿನ ಪ್ರಕಾರ್ಯಗಳನ್ನು ನಿರ್ವಹಿಸುವಂತೆ ಆದೇಶಿಸಿದೆ.

**1. ಗ್ರಾಮ ಪಂಚಾಯತಿಯ ಕಡ್ಡಾಯ ಕರ್ತವ್ಯಗಳು:**

ಅನುಸೂಚಿ-I ರಲ್ಲಿ ಏನೇ ಇದ್ದರೂ, ಗ್ರಾಮ ಪಂಚಾಯತಿಯ ವಶದಲ್ಲಿರುವ ಗ್ರಾಮ ಪಂಚಾಯತಿ ನಿಧಿಯು ಅನುಮತಿಸುವಷ್ಟರಮಟ್ಟಿಗೆ ಗ್ರಾಮ ಪಂಚಾಯತಿಯು ಈ ಕೆಳಗಿನ ವಿಷಯಗಳ ಬಗ್ಗೆ ಪಂಚಾಯತಿ ಪ್ರದೇಶದೊಳಗೆ ಸೂಕ್ತವಾಗಿ ಅವಕಾಶ ಕಲ್ಪಿಸುವುದು ಕಡ್ಡಾಯವಾಗತಕ್ಕದ್ದು.

1) ಪ್ರತಿ ವರ್ಷ ಶೇಕಡಾ ಹತ್ತರಷ್ಟು ಮನೆಗಳಿಗೆ ಕಡಿಮೆ ಇಲ್ಲದಂತೆ ಶೌಚಗೃಹಗಳನ್ನು ಒದಗಿಸುವುದು ಮತ್ತು ಸಾಧ್ಯವಾದಷ್ಟು ಬೇಗನೆ ಎಲ್ಲ ಮನೆಗಳಿಗೂ ಈ ಸೌಲಭ್ಯವನ್ನು ಒದಗಿಸುವ ಗುರಿ ಸಾಧಿಸುವುದು.

2) ಪುರುಷರು ಮತ್ತು ಮಹಿಳೆಯರಿಗಾಗಿ ಸಾಕಷ್ಟು ಸಮುದಾಯ ಶೌಚಗೃಹಗಳನ್ನು ನಿರ್ಮಿಸುವುದು ಮತ್ತು ಅವುಗಳನ್ನು ನಿರ್ವಹಿಸುವುದು.

3) ಸಾಕಷ್ಟು ಸಂಪನ್ಮೂಲಗಳನ್ನು ಸೃಜಿಸಿ ತಾನೇ ಅಥವಾ ವಾರ್ಷಿಕ ಕರಾರಿನ ಮೂಲಕವಾಗಲಿ ನೀರು ಪೂರೈಕೆ ಕಾಮಗಾರಿಗಳನ್ನು ನಿರ್ವಹಿಸುವುದು.

4) ಈ ಅಧಿನಿಯಮದಡಿ ವಿಧಿಸಬಹುದಾದ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ನಿಯತಕಾಲಿಕವಾಗಿ ಪರಿಶೀಲಿಸುವುದು ಮತ್ತು ವಸೂಲು ಮಾಡುವುದು.

5) ಪ್ರಾಥಮಿಕ ಶಾಲೆಗೆ ಮಕ್ಕಳ ಸಾರ್ವತ್ರಿಕ ದಾಖಲಾತಿಯನ್ನು ಖಚಿತಪಡಿಸಿಕೊಳ್ಳುವುದು.

6) ಮಕ್ಕಳಿಗೆ ಸಾರ್ವತ್ರಿಕವಾಗಿ ರೋಗನಿರೋಧಕ ಚುಚ್ಚು ಮದ್ದು ನೀಡುವ ಕಾರ್ಯಕ್ರಮಗಳನ್ನು ಸಾಧಿಸುವುದು.

7) ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವುದು.

8) ನೈರ್ಮಲ್ಯ ವ್ಯವಸ್ಥೆ ಮತ್ತು ಸರಿಯಾದ ಚರಂಡಿ ವ್ಯವಸ್ಥೆಯನ್ನು ಒದಗಿಸುವುದು.

9) ಸಾರ್ವಜನಿಕ ರಸ್ತೆಗಳ ನಿರ್ಮಾಣ, ದುರಸ್ತಿ ಮತ್ತು ನಿರ್ವಹಣೆ ಮಾಡುವುದು.

10) ಸಾರ್ವಜನಿಕ ರಸ್ತೆ ಅಥವಾ ಸಾರ್ವಜನಿಕ ಸ್ಥಳಗಳ ಮೇಲಿನ ಒತ್ತುವರಿಗಳನ್ನು ತೆಗೆದುಹಾಕುವುದು.

11) ಸಾಕಷ್ಟು ರಸ್ತೆ ದೀಪಗಳನ್ನು ಒದಗಿಸುವುದು ಮತ್ತು ವಿದ್ಯುತ್ ಶುಲ್ಕಗಳನ್ನು ನಿಯತವಾಗಿ ಸಂದಾಯ ಮಾಡುವುದು.

12) ಅನೈರ್ಮಲ್ಯಕರ ಗುಂಡಿಗಳನ್ನು ತುಂಬಿಸುವುದು ಮತ್ತು ಗ್ರಾಮಗಳಲ್ಲಿ ಅನಾರೋಗ್ಯಕರ ಪ್ರದೇಶಗಳನ್ನು ಸ್ವಚ್ಛತೆಗೊಳಿಸುವುದು.

13) ಹುಚ್ಚುನಾಯಿಗಳನ್ನು ಮತ್ತು ಮಾಲೀಕರಿಲ್ಲದ ನಾಯಿಗಳನ್ನು ಸಾಯಿಸುವುದು.

14) ಗ್ರಾಮ ಪಂಚಾಯತಿಯಲ್ಲಿ ನಿಹಿತವಾಗಿರುವ ಎಲ್ಲ ಸಮುದಾಯ ಆಸ್ತಿಗಳನ್ನು ನಿರ್ವಹಿಸುವುದು.

15) ಜನಗಣತಿ, ಬೆಳೆ–ಗಣತಿ, ಜಾನುವಾರು–ಗಣತಿ, ನಿರುದ್ಯೋಗಿಗಳ ಮತ್ತು ಬಡತನ ರೇಖೆಗಿಂತ ಕೆಳಗಿರುವ ವ್ಯಕ್ತಿಗಳ ಗಣತಿಗೆ ಸಂಬಂಧಪಟ್ಟ ದಾಖಲೆಗಳನ್ನು ನಿರ್ವಹಿಸುವುದು.

16) ನಿರುಪಯುಕ್ತ ವಸ್ತುಗಳನ್ನು ಮತ್ತು ಗೊಬ್ಬರವನ್ನು ರಾಶಿ ಹಾಕುವುದಕ್ಕೆ ವಾಸದ ಮನೆಗಳಿಂದ ದೂರದಲ್ಲಿರುವ ಜಾಗಗಳನ್ನು ಪ್ರತ್ಯೇಕವಾಗಿ ಗುರುತಿಸುವುದು.

17) ಜೈವಿಕ ವೈವಿಧ್ಯತೆಯನ್ನು ಸಂರಕ್ಷಿಸುವುದು.

18) ಗ್ರಾಮ ಪಂಚಾಯತಿಯು, ಪಂಚಾಯತಿ ಪ್ರದೇಶದಲ್ಲಿ ಪಂಚಾಯತಿ ಪ್ರದೇಶದ ನಿವಾಸಿಗಳ ಆರೋಗ್ಯ, ಸುರಕ್ಷತೆ, ಶಿಕ್ಷಣ, ಸುಖ ಸೌಖ್ಯ, ಸೌಕರ್ಯ ಅಥವಾ ಸಾಮಾಜಿಕ ಅಥವಾ ಆರ್ಥಿಕ ಉನ್ನತಿಯನ್ನು ವೃದ್ಧಿಸುವಂತಹ ಇತರ ಕೆಲಸಗಳನ್ನು ಅಥವಾ ಮಾರ್ಗೋಪಾಯಗಳನ್ನು ನಿರ್ವಹಿಸಲು ಸಹ ಏರ್ಪಾಟು ಮಾಡಬಹುದು.

**2. ತಾಲ್ಲೂಕು ಪಂಚಾಯತಿಯ ಕಡ್ಡಾಯ ಕರ್ತವ್ಯಗಳು:**

ಅನುಸೂಚಿ II ರಲ್ಲಿ ಏನೇ ಇದ್ದರೂ, ತಾಲೂಕು ಪಂಚಾಯತಿಯ ವಶದಲ್ಲಿರುವ ತಾಲೂಕು ಪಂಚಾಯತಿ ನಿಧಿಯು ಅನುಮತಿಸುವಷ್ಟರಮಟ್ಟಿಗೆ ತಾಲೂಕು ಪಂಚಾಯತಿಗೆ ಈ ಕೆಳಗಿನ ವಿಷಯಗಳ ಬಗ್ಗೆ ಅದರ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಪ್ರದೇಶದೊಳಗೆ ಸೂಕ್ತವಾಗಿ ಅವಕಾಶ ಕಲ್ಪಿಸುವುದು ಕಡ್ಡಾಯವಾಗಿರತಕ್ಕದ್ದು.

1) ದಿನ ಒಂದಕ್ಕೆ ಪ್ರತಿ ವ್ಯಕ್ತಿಗೆ ನಲವತ್ತು ಲೀಟರುಗಳಿಗೆ ಕಡಿಮೆ ಇಲ್ಲದಂತೆ ನೀರು ಪೂರೈಸುವುದಕ್ಕಾಗಿ ನೀರು ಪೂರೈಕೆ ಕಾಮಗಾರಿಗಳನ್ನು ನಿರ್ಮಿಸುವುದು ಮತ್ತು ಹೆಚ್ಚಿಸುವುದು.

2) ತಾಲೂಕಿನೊಳಗಿನ ಗ್ರಾಮ ಪಂಚಾಯತಿಯ ಕಾರ್ಯಚಟುವಟಿಕೆಗಳು:

(ಎ) ಗ್ರಾಮ ಸಭೆಯನ್ನು ನಡೆಸುವುದು.

(ಬಿ) ನೀರು ಪೂರೈಕೆ ಕಾಮಗಾರಿಗಳ ನಿರ್ವಹಣೆ.

(ಸಿ) ವೈಯಕ್ತಿಕ ಮತ್ತು ಸಮುದಾಯ ಶೌಚಗೃಹವನ್ನು ನಿರ್ಮಿಸುವುದು.

(ಡಿ) ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಸೂಲು ಮಾಡುವುದು ಮತ್ತು ಅವುಗಳ ಪರಿಷ್ಕರಣೆ.

(ಇ) ವಿದ್ಯುತ್ ಶುಲ್ಕಗಳನ್ನು ಸಂದಾಯ ಮಾಡುವುದು.

(ಎಫ್) ಶಾಲೆಗಳಿಗೆ ಮಕ್ಕಳ ನೋಂದಣಿ.

(ಜಿ) ರೋಗ ನಿರೋಧಕ ಚುಚ್ಚು ಮದ್ದುಗಳ ಪ್ರಗತಿ.

ಇವುಗಳ ಬಗ್ಗೆ ಅರ್ಧ ವಾರ್ಷಿಕ ವರದಿಯನ್ನು ಮೇಲ್ಪಟ್ಟ ಪ್ರಾಧಿಕಾರಕ್ಕೆ ಸಲ್ಲಿಸುವುದು.

3) ಪ್ರಾಥಮಿಕ ಶಾಲಾ ಕಟ್ಟಡಗಳನ್ನು ಸುಸ್ಥಿತಿಯಲ್ಲಿಡುವುದು ಮತ್ತು ಸಾಕಷ್ಟು ಪಾತದ ಕೊಠಡಿಗಳನ್ನು ಮತ್ತು ನೀರು ಪೂರೈಕೆ ಹಾಗೂ ನೈರ್ಮಲ್ಯ ವ್ಯವಸ್ಥೆಯನ್ನು ಒದಗಿಸುವುದು.

4) ಗ್ರಾಮಗಳಲ್ಲಿ ವಾಸದ ಮನೆಗಳಿಂದ ದೂರದಲ್ಲಿ ಗೊಬ್ಬರದ ಗುಂಡಿಗಳಿಗೆ ಜಾಗ ಗುರುತಿಸುವುದಕ್ಕಾಗಿ ಭೂಮಿಯನ್ನು ಆರ್ಜಿಸುವುದು.

**3. ಜಿಲ್ಲಾ ಪಂಚಾಯತಿಯ ಕಡ್ಡಾಯ ಕರ್ತವ್ಯಗಳು:**

ಅನುಸೂಚಿ III ರಲ್ಲಿ ಏನೇ ಇದ್ದರೂ, ಜಿಲ್ಲಾ ಪಂಚಾಯತಿಯ ವಶದಲ್ಲಿರುವ ನಿಧಿಯು ಅನುಮತಿಸುವಷ್ಟರಮಟ್ಟಿಗೆ, ಜಿಲ್ಲಾ ಪಂಚಾಯತಿಯು ಈ ಕೆಳಗಿನ ವಿಷಯಗಳ ಬಗ್ಗೆ ಅದರ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಪ್ರದೇಶದೊಳಗೆ ಸೂಕ್ತವಾಗಿ ಅವಕಾಶ ಕಲ್ಪಿಸುವುದು ಕಡ್ಡಾಯವಾಗತಕ್ಕದ್ದು.

1) ಸರ್ಕಾರವು ವಿಧಿಸಲಾಗಿರುವ ಸೂತ್ರಗಳಿಗೆ ಅನುಸಾರವಾಗಿ ಐದು ವರ್ಷಗಳೊಳಗೆ ಸಂಪೂರ್ಣ ಜನತೆಯನ್ನು ಒಳಗೊಳ್ಳುವಂತೆ ಆರೋಗ್ಯ ಕೇಂದ್ರಗಳನ್ನು ಹಾಗೂ ಪ್ರಸೂತಿ ಕೇಂದ್ರಗಳನ್ನು ಸ್ಥಾಪಿಸುವುದು.

2) ಕುಡಿಯುವ ನೀರಿನ ಬಾವಿಗಳಲ್ಲಿ ನೀರು ಇರುವಂತೆ ನೋಡಿಕೊಳ್ಳುವುದಕ್ಕಾಗಿ ಅಂತರ್ಜಲ ಒರತೆ ಬತ್ತಿ ಹೋಗದಂತೆ ನಿರ್ಮಿತಿಗಳನ್ನು ರಚಿಸುವುದು.

3) ವಿಶೇಷವಾಗಿ ಕಡಿಮೆ ಮಳೆಯಾಗಿರುವ ಕಾಲದಲ್ಲಿ ಸಾಕಷ್ಟು ಕುಡಿಯುವ ನೀರು ಸಿಗುವಂತೆ ಮಾಡುವುದಕ್ಕಾಗಿ ಕುಡಿಯುವ ನೀರಿನ ಬಾವಿಗಳ ಅಕ್ಕಪಕ್ಕದಲ್ಲಿ ನೀರಾವರಿ ಕೊಳವೆ ಬಾವಿಗಳನ್ನು ಕೊರೆಯುವುದನ್ನು ತಡೆಗಟ್ಟುವುದು.

4) ಪ್ರತಿಯೊಂದು ತಾಲೂಕಿನಲ್ಲಿ ಸಾಮಾಜಿಕ ಅರಣ್ಯೋದ್ಯಮದ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸುವುದು ಮತ್ತು ಪ್ರತಿ ವರ್ಷ ಜಿಲ್ಲಾ ಯೋಜನೆ ಹಂಚಿಕೆಯಲ್ಲಿ ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂಥ ಶೇಕಡಾವಾರಿಗೆ ಕಡಿಮೆ ಇಲ್ಲದಂತೆ ಖರ್ಚು ಮಾಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

**ಟಿ.ವಿ. ಅರುಣ್‌ಕುಮಾರ್**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 100